# ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ: 03-09-2021ರ ಶುಕ್ರವಾರದಂದು ಪೂರ್ವಾಹ್ನ 11.30 ಗಂಟೆಗೆ ನಡೆದ "ಏಳನೇ ಸಾಮಾನ್ಯ ಸಿಂಡಿಕೇಟ್ ಸಭೆ"ಯ ನಡವಳಿಗಳು.

<u>ಹಾಜರಿದ್ದ ಸದಸ್ಯರುಗಳು:</u>

| | | |
|---|---|---|
| 1. | ಪ್ರೊ. ಜಿ.ಹೇಮಂತಕುಮಾರ್ | ಕುಲಪತಿಗಳು ಹಾಗೂ ಅಧ್ಯಕ್ಷರು |
| 2. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಶ್ರೀ ಕೆ.ಸಿ ವೀರಭದ್ರಯ್ಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 3. | ಪ್ರೊ. ಜಿ.ವೆಂಕಟೇಶ್ ಕುಮಾರ್ | ಸದಸ್ಯರು |
| 4. | ಶ್ರೀ ಎಂ.ಬಿ. ಗಪ್ಪಣ್ಣ | ಸದಸ್ಯರು |
| 5. | ಡಾ. ಚೈತ್ರ ನಾರಾಯಣ | ಸದಸ್ಯರು |
| 6. | ಡಾ. ವೆಂಕಟೇಶಯ್ಯ | ಸದಸ್ಯರು |
| 7. | ಡಾ. ನಾಗರಾಜು | ಸದಸ್ಯರು |
| 8. | ಡಾ. ಬಿ.ರಾಜಣ್ಣ | ಸದಸ್ಯರು |
| 9. | ಡಾ. ವೆಂಕಟೇಶ್ ಜೆ ಎನ್ | ಸದಸ್ಯರು |
| 10. | ಶ್ರೀ. ಆರ್.ಪ್ರದೀಪ್ ಕುಮಾರ್ ದೀಕ್ಷಿತ್ | ಸದಸ್ಯರು |
| 11. | ಶ್ರೀ ಎಸ್.ಡಿ.ದೊಡ್ಡಚಾರಿ | ಸದಸ್ಯರು |
| 12. | ಶ್ರೀಮತಿ ವೈ.ಕೆ.ಪವಿತ್ರ | ಸದಸ್ಯರು |
| 13. | ಡಾ. ಈ.ಸಿ.ನಿಂಗರಾಜ್ ಗೌಡ | ಸದಸ್ಯರು |
| 14. | ಡಾ. ಎಂ.ಎಸ್.ದಾಮೋಧರ | ಸದಸ್ಯರು |
| 15. | ಡಾ. ಸೈಯದ್ ಕಾಝು ಮೊಹಿದ್ದೀನ್ | ಸದಸ್ಯರು |
| | (ವರ್ಚ್ಯುಯಲ್ ಮೋಡ್) | ಸದಸ್ಯರು |
| 16. | ಪ್ರೊ. ಎ.ಪಿ.ಜ್ಞಾನ ಪ್ರಕಾಶ್, ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 17. | ಡಾ. ಸಂಗೀತಾ ಗಜಾನನ್ ಭಟ್, ಹಣಕಾಸು ಅಧಿಕಾರಿಗಳು | ಸದಸ್ಯರು |
| 18. | ಪ್ರೊ. ಆರ್.ಶಿವಪ್ಪ | ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ |

<u>ಹಾಜರಾಗದ ಸದಸ್ಯರು:</u>

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಸಭೆಗೆ ಹಾಜರಿದ್ದ ಸದಸ್ಯರುಗಳನ್ನು ಹುತ್ಪೂರ್ವಕವಾಗಿ ಸಭೆಗೆ ಸ್ವಾಗತಿಸಿದರು.

ಮಾನ್ಯ ಕುಲಪತಿಗಳು ಸಭೆಗೆ ಆಗಮಿಸಿದ್ದ ಎಲ್ಲಾ ಸದಸ್ಯರುಗಳನ್ನು ಸ್ವಾಗತಿಸಿ, ದಿನಾಂಕ; 07-09-2021ರಂದು 101ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮನ್ನು ಆಯೋಜಿಸಲಾಗಿದೆ ಹಾಗೂ ದಿನಾಂಕ: 15-09-2021 ರಿಂದ 17-09-2021ರವರೆಗೆ ನ್ಯಾಕ್ ಪೀರ್ ತಂಡವು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡುತ್ತಿದ್ದಾರೆ ಎಂದು ಸಭೆಯ ಗಮನಕ್ಕೆ ತಂದರು. ಮುಂದುವರೆದು ಮಾತನಾಡಿ ಈ ಸಂಬಂಧ ಸಿಂಡಿಕೇಟ್ ಸದಸ್ಯರುಗಳು ಇದುವರೆವಿಗೂ ವಿಶ್ವವಿದ್ಯಾನಿಲಯದ ಉನ್ನತಿಗೆ ನೀಡಿರುವಂತಹ ಸಹಕಾರವನ್ನು ಮುಂದೆಯೂ ಸಹ ನೀಡಬೇಕೆಂದು ಕೋರಿದರು.

ತದನಂತರ, ಮಾನ್ಯ ಕುಲಪತಿಗಳು ಕಾರ್ಯಸೂಚಿಯಲ್ಲಿನ ವಿಷಯಗಳನ್ನು ಸಭೆಯಲ್ಲಿ ಮಂಡಿಸಿದರು.

| ವಿಷಯ ಸಂಖ್ಯೆ | ವಿಷಯ ಸಂಕ್ಷಿಪ್ತವಾಗಿ |
|---|---|
| **ದಿನಾಂಕ: 29-07-2021ರಂದು ಜರುಗಿದ "ಆರನೇ ಸಾಮಾನ್ಯ ಸಿಂಡಿಕೇಟಿನ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.** | |
| **ತೀರ್ಮಾನ** | ದಿನಾಂಕ: 29-07-2021ರಂದು ಜರುಗಿದ ಸಭೆಯಲ್ಲಿ ವಿಷಯ ಸಂಖ್ಯೆ: 2021/7.7ರಲ್ಲಿ "ಡಾ. ಯು.ಆರ್.ಅನಂತಮೂರ್ತಿ ಅಧ್ಯಯನ ಪೀಠ"ಕ್ಕೆ ಸಂಬಂಧಿಸಿದಂತೆ ಸನ್ಮಾನ್ಯ ಕುಲಾಧಿಪತಿಗಳಿಂದ ಅನುಮೋದಿತಗೊಂಡಿರುವ ಪರಿನಿಯಮಾವಳಿಯನ್ನು ಪ್ರಕಟಿಸುವ ಬಗ್ಗೆ ವಿಷಯ ಮಂಡಿಸಲಾಗಿ, ಈ ಕೆಳಕಂಡಂತೆ ತೀರ್ಮಾನಿಸಲಾಯಿತು.<br><br>ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸಾಹಿತಿ ಡಾ. ಯು.ಆರ್.ಅನಂತಮೂರ್ತಿ ಇವರ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸುವ ಕುರಿತಂತೆ ಸನ್ಮಾನ್ಯ ಕುಲಾಧಿಪತಿಗಳಿಂದ ಅನುಮೋದನೆಗೊಂಡಿರುವ "ಡಾ. ಯು.ಆರ್.ಅನಂತಮೂರ್ತಿ ಅಧ್ಯಯನ ಪೀಠ"ದ ಪರಿನಿಯಮಾವಳಿಯ ಉದ್ದೇಶಗಳನ್ನು ಈಡೇರಿಸಲು ಅಧಿಸೂಚನೆ/ಪ್ರಕಟಣೆ ಹೊರಡಿಸಲು ಸಿಂಡಿಕೇಟ್ ಸಭೆಯು ನಿರ್ಣಯಿಸಲಾಗಿತ್ತು.<br><br>**ಆದರೆ, ದಿನಾಂಕ: 29-07-2020ರಂದು ಜರುಗಿದ ಸಭೆಯಲ್ಲಿ ವಿಷಯ ಸಂಖ್ಯೆ: 2021/7.7ರಲ್ಲಿ "ಡಾ. ಯು.ಆರ್.ಅನಂತಮೂರ್ತಿ ಅಧ್ಯಯನ ಪೀಠ"ಕ್ಕೆ ಸಂಬಂಧಿಸಿದಂತೆ ತೀರ್ಮಾನಿಸಲಾಗಿರುವ ನಿರ್ಣಯವನ್ನು ಈ ಕೆಳಕಂಡಂತೆ ತಿದ್ದುಪಡಿ ಮಾಡುವುದರೊಂದಿಗೆ ದಿನಾಂಕ: 29-07-2021 ರಂದು ಜರುಗಿದ "ಆರನೇ ಸಾಮಾನ್ಯ ಸಿಂಡಿಕೇಟಿನ ಸಭೆ"ಯ ನಡವಳಿಯನ್ನು ದೃಢೀಕರಿಸಲಾಯಿತು.**<br><br>ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸಾಹಿತಿ ಡಾ. ಯು.ಆರ್. ಅನಂತಮೂರ್ತಿ, ಇವರ ಹೆಸರಿನಲ್ಲಿ ಅಧ್ಯಯನ ಪೀಠವನ್ನು ಸ್ಥಾಪಿಸುವ ಕುರಿತಂತೆ ಸನ್ಮಾನ್ಯ ಕುಲಾಧಿಪತಿಗಳಿಂದ ಅನುಮೋದನೆಗೊಂಡಿರುವ "ಡಾ. ಯು.ಆರ್. ಅನಂತಮೂರ್ತಿ ಅಧ್ಯಯನ ಪೀಠ"ದ ಪರಿನಿಯಮಾವಳಿಯ ಉದ್ದೇಶಗಳನ್ನು ಈಡೇರಿಸಲು ಅಧಿಸೂಚನೆ/ಪ್ರಕಟಣೆ ಹೊರಡಿಸಲು ಪ್ರಸ್ತಾಪಿಸಲಾಯಿತು. ಆದರೆ ಈ ಸಂಬಂಧ ಕುಲಾಧಿಪತಿಗಳಿಂದ ನಾಮನಿರ್ದೇಶನಗೊಂಡಿರುವ ಸಿಂಡಿಕೇಟ್ ಸದಸ್ಯರಾದ ಶ್ರೀ ಎಂ.ಬಿ. ಗಪ್ಪಣ್ಣ ನವರು 'ಡಾ. ಯು.ಆರ್. ಅನಂತಮೂರ್ತಿ ಅಧ್ಯಯನ ಪೀಠ'ವನ್ನು ಸ್ಥಾಪಿಸುವ ಸಂಬಂಧದ ಪ್ರಕಟಣೆಯನ್ನು ಹೊರಡಿಸಲು ಹಾಗೂ ಅನುಷ್ಠಾನಗೊಳಿಸಲು ಸಹಮತಿ |

| | |
|---|---|
| | ಇರುವುದಿಲ್ಲವೆಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿ, ಈ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಸ್ಪಷ್ಟೀಕರಣ ಪಡೆಯಬೇಕೆಂದು ಸಹ ತಿಳಿಸಿದರು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ನಾಮನಿರ್ದೇಶನಗೊಂಡಿರುವ ಇತರೆ ಸದಸ್ಯರುಗಳಾದ ಶ್ರೀ ಆರ್. ಪ್ರದೀಪ್‌ಕುಮಾರ್ ದೀಕ್ಷಿತ್, ಶ್ರೀ ಎಸ್.ಡಿ. ದೊಡ್ಡಚಾರಿ, ಶ್ರೀಮತಿ ಪವಿತ್ರಾ ವೈ.ಕೆ ,ಡಾ. ಈ.ಸಿ. ನಿಂಗರಾಜಗೌಡ ಹಾಗೂ ಡಾ. ಎಂ.ಎಸ್. ದಾಮೋದರ ಅವರುಗಳು ಸಹ ಶ್ರೀ ಎಂ.ಬಿ. ಗಪ್ಪಣ್ಣನವರು ವ್ಯಕ್ತಪಡಿಸಿದ ಅಭಿಪ್ರಾಯಕ್ಕೆ ಸಹಮತಿಯನ್ನು ವ್ಯಕ್ತಪಡಿಸಿದರು.<br><br>ನಂತರ, ಡಾ. ಜಿ.ವೆಂಕಟೇಶ್‌ಕುಮಾರ್‌ರವರು ಮಾತನಾಡಿ, ಈಗಾಗಲೇ ಕುಲಾಧಿಪತಿಗಳಿಂದ ಹಾಗೂ ಸರ್ಕಾರದಿಂದ 'ಡಾ. ಯು.ಆರ್. ಅನಂತಮೂರ್ತಿ ಅಧ್ಯಯನ ಪೀಠ'ವನ್ನು ಸ್ಥಾಪಿಸಲು ಅಂಕಿತ ದೊರೆತಿರುವುದರಿಂದ ಮತ್ತೊಮ್ಮೆ ಕುಲಾಧಿಪತಿಗಳಿಂದ ಮತ್ತು ಸರ್ಕಾರದಿಂದ ಅನುಮತಿ ಪಡೆಯುವಂತಿಲ್ಲ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.<br><br>ಕುಲಾಧಿಪತಿಗಳಿಂದ, ಸರ್ಕಾರದಿಂದ ನಾಮನಿರ್ದೇಶನಗೊಂಡಿರುವ ಸದಸ್ಯರುಗಳು ಹಾಗೂ ಇತರ ಸದಸ್ಯರುಗಳು 'ಡಾ. ಯು.ಆರ್. ಅನಂತಮೂರ್ತಿ ಅಧ್ಯಯನ ಪೀಠ'ದ ಬಗ್ಗೆ ಸರ್ಕಾರ ಮತ್ತು ಕುಲಾಧಿಪತಿಗಳಿಂದ ಅಂಕಿತಗೊಂಡಿರುವ ಅಧಿನಿಯಮವನ್ನು ಪ್ರಕಟಿಸುವ ಬಗೆಗೆ ಅಸಮ್ಮತಿಯನ್ನು ವ್ಯಕ್ತಪಡಿಸಿರುವುದರಿಂದ, ಸದರಿ ಅಧಿನಿಯಮದ ಪ್ರಕಟಣೆಯನ್ನು ಸ್ಥಗಿತಗೊಳಿಸಲು ಸಿಂಡಿಕೇಟ್ ಸಭೆಯು ತೀರ್ಮಾನಿಸಿತು. |
| | **ದಿನಾಂಕ: 29-07-2021ರಂದು ಜರುಗಿದ "ಆರನೇ ಸಾಮಾನ್ಯ ಸಿಂಡಿಕೇಟಿನ ಸಭೆ"ಯ ನಡವಳಿಯನ್ನು ದೃಢೀಕರಿಸಲಾಯಿತು.** |
| **ಸಾಮಾನ್ಯ ಸಭೆ 2021/8.1** | ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| **ತೀರ್ಮಾನ** | ಪ್ರೊ. ಎಂ.ಚಂದ್ರಶೇಖರ್, ಪ್ರಾಧ್ಯಾಪಕರು, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ:30-09-2019 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ವಿಭಾಗದ ಅಧ್ಯಕ್ಷರ ಅವಧಿಯು ದಿನಾಂಕ: 29-09-2021ಕ್ಕೆ ಮುಕ್ತಾಯಗೊಳ್ಳುತ್ತಿದೆ. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ ಜೇಷ್ಠತೆಯಲ್ಲಿ ಹಿರಿಯರಾಗಿರುವ ಪ್ರೊ. ಎನ್.ಎಸ್.ಹರಿನಾರಾಯಣ ಇವರನ್ನು ದಿನಾಂಕ:30-09-2021 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| **ಸಾಮಾನ್ಯ ಸಭೆ 2021/8.2** | ಜೆ.ಎಸ್.ಎಸ್. ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ. ರಸ್ತೆ, ಮೈಸೂರು ಇವರ ಸಂಶೋಧನಾ ಕೇಂದ್ರದಲ್ಲಿ ಹೆಚ್ಚುವರಿ ವಿಷಯಗಳಲ್ಲಿ ಸಂಶೋಧನೆ ನಡೆಸಲು ಅನುಮೋದನೆ ಕೋರಿರುವ ಬಗ್ಗೆ. |
| **ತೀರ್ಮಾನ** | ಜೆ.ಎಸ್.ಎಸ್. ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ. ರಸ್ತೆ, ಮೈಸೂರು ರವರು ವಿಶ್ವವಿದ್ಯಾನಿಲಯದಿಂದ ಸಂಶೋಧನಾ ಕೇಂದ್ರದ ಮಾನ್ಯತೆ ಪಡೆದು Speech & Hearing ವಿಷಯದಲ್ಲಿ ನಡೆಸುತ್ತಿರುವ ಸಂಶೋಧನಾ ಕಾರ್ಯದ ಜೊತೆಗೆ ಹೆಚ್ಚುವರಿಯಾಗಿ Spech Language Pathology ಮತ್ತು Audiology ವಿಷಯಗಳಲ್ಲಿ ಪಿಎಚ್.ಡಿ ಪದವಿಗಾಗಿ ಸಂಶೋಧನೆ ನಡೆಸಲು ಅನುಮೋದಿಸಲಾಯಿತು. |

| | |
|---|---|
| ಸಾಮಾನ್ಯ ಸಭೆ 2021/8.3 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೋಗ್ರಾಮರ್‌ಗಳಿಗೆ 7ನೇ ಪರಿಷ್ಕೃತ ಯು.ಜಿ.ಸಿ. ವೇತನ ಶ್ರೇಣಿ ವಿಸ್ತರಿಸುವ ಬಗ್ಗೆ. |
| | ಶ್ರೀ ದೊಡ್ಡಚಾರಿ ಹಾಗೂ ಡಾ. ದಾಮೋದರ್‌ರವರು ಮಾತನಾಡಿ, ಶ್ರೀ ಮಲ್ಲನಾಥ್ ಪ್ರಸಾದ್ ಇವರು ವಿಶ್ವವಿದ್ಯಾನಿಲಯಕ್ಕೆ ಬಾಕಿ ಇರುವ ಎಲ್ಲಾ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ ಎಂಬ ಆರೋಪವಿರುವುದರಿಂದ ಅವರನ್ನು ಹೊರತುಪಡಿಸಿ, ಡಾ. ಗಂಗಾಧರ್ ಅವರಿಗೆ ನೀಡಲು ಸಭೆಯಲ್ಲಿ ಪ್ರಸ್ತಾಪವಾಯಿತು. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ಪ್ರೋಗ್ರಾಮರ್‌ಗಳಾಗಿ ಕಾರ್ಯ ನಿರ್ವಹಿಸುತ್ತಿದ್ದು, ನಿವೃತ್ತಿಯಾಗಿರುವ ಶ್ರೀ ಮಲ್ಲನಾಥ್ ಪ್ರಸಾದ್ ಮತ್ತು ಇನ್ನು ಕಾರ್ಯನಿರ್ವಹಿಸುತ್ತಿರುವ ಡಾ. ಗಂಗಾಧರ್ ಅವರುಗಳಿಗೆ ಷರತ್ತುಬದ್ಧ ಮುಚ್ಚಳಿಕೆಯನ್ನು ಲಿಖಿತ ರೂಪದಲ್ಲಿ ಪಡೆದು ದಿನಾಂಕ: 01-01-2016ರಿಂದ ಜಾರಿಗೆ ಬಂದಂತೆ 7ನೇ ಯುಜಿಸಿ ಪರಿಷ್ಕೃತ ವೇತನ ಶ್ರೇಣಿಯನ್ನು ವಿಸ್ತರಿಸಿರುವ ವಿಶ್ವವಿದ್ಯಾನಿಲಯದ ಕ್ರಮವನ್ನು ಸಭೆಯು ಅನುಸಮರ್ಥಿಸಿತು. ಮುಂದುವರೆದು, ಶ್ರೀ ಮಲ್ಲನಾಥ್ ಪ್ರಸಾದ್ ಅವರಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯವು ಇನ್ನು ನೀಡಬೇಕಾದ ಸೌಲಭ್ಯಗಳನ್ನು ತಡೆಹಿಡಿದು, ಸದರಿಯವರು ವಿಶ್ವವಿದ್ಯಾನಿಲಯಕ್ಕೆ ಬಾಕಿ ಇರುವ ಎಲ್ಲಾ ದಾಖಲಾತಿಗಳನ್ನು ನೀಡಿದ ನಂತರವೇ ಸೌಲಭ್ಯಗಳನ್ನು ನೀಡಲು ಸಿಂಡಿಕೇಟ್ ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/8.4 | ಪ್ರೊ. ರಫತುನ್ನೀಸಾ ಬೇಗಂ (ನಿವೃತ್ತ ಪ್ರಾಧ್ಯಾಪಕರು), ಉರ್ದು ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಸಂದರ್ಶಕ ಪ್ರಾಧ್ಯಾಪಕರನ್ನಾಗಿ ನೇಮಿಸಿರುವ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದಲ್ಲಿ ಸಂದರ್ಶಕ ಪ್ರಾಧ್ಯಾಪಕರನ್ನು ನೇಮಕ ಮಾಡುವ ಸಂಬಂಧ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ದ ಪ್ರಕರಣ 53 (10)ರಲ್ಲಿನ ನಿಯಮದ ಪ್ರಕಾರ ಪ್ರೊ. ರಫತುನ್ನೀಸಾ ಬೇಗಂ (ನಿವೃತ್ತ ಪ್ರಾಧ್ಯಾಪಕರು), ಉರ್ದು ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಉರ್ದು ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಬೋಧನಾ ಕಾರ್ಯ ನಿರ್ವಹಿಸಲು ಸಂದರ್ಶಕ ಪ್ರಾಧ್ಯಾಪಕರನ್ನಾಗಿ ಮಾಹೆಯಾನ ರೂ.25,000/-ಗಳ ಗೌರವ ಸಂಭಾವನೆಯೊಂದಿಗೆ ನೇಮಕ ಮಾಡಿರುವುದನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2021/8.5 | ವಿವಿಧ ವಿಭಾಗಗಳ ಅಧ್ಯಕ್ಷರು / ನಿರ್ದೇಶಕರು / ಸಂಯೋಜಕರು ಇತರೆ ಮುಖ್ಯಸ್ಥರುಗಳನ್ನು ನೇಮಿಸುವ ಸಂಬಂಧ ಬೋಧಕ ವರ್ಗದವರ ಜ್ಯೇಷ್ಠತಾ ಪಟ್ಟಿ/ ನಿಯಮಾವಳಿಯನ್ನು ಸಿದ್ಧಪಡಿಸಿ ಸಮಿತಿಯು ಸಲ್ಲಿಸಿರುವ ವರದಿಯ ಬಗ್ಗೆ. |
| ತೀರ್ಮಾನ | ಸಮಿತಿಯ ಶಿಫಾರಸ್ಸಿನನ್ವಯ ವಿವಿಧ ವಿಭಾಗಗಳ ಅಧ್ಯಕ್ಷರು / ನಿರ್ದೇಶಕರು / ಸಂಯೋಜಕರು ಇತರೆ ಮುಖ್ಯಸ್ಥರುಗಳನ್ನು ನೇಮಿಸುವ ಸಂಬಂಧ ಬೋಧಕ ವರ್ಗದವರ ಜ್ಯೇಷ್ಠತಾ ಪಟ್ಟಿ/ ನಿಯಮಾವಳಿಯನ್ನು ಸಿದ್ಧಪಡಿಸಿ ಸಮಿತಿಯು ಸಲ್ಲಿಸಿರುವ ವರದಿಯನ್ನು ಸಭೆಯಲ್ಲಿ ಅನುಮೋದಿಸಲಾಯಿತು. |
| ಸಾಮಾನ್ಯ ಸಭೆ 2021/8.6 | ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರೊಬ್ಬರ ಹೆಸರನ್ನು ನಾಮನಿರ್ದೇಶನ ಮಾಡುವ ಬಗ್ಗೆ. |
| | ಮಾನ್ಯ ಕುಲಪತಿಯವರು ಮಾತನಾಡಿ, ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರು ತಮ್ಮ ಪತ್ರ ದಿನಾಂಕ: 03-08-2021 ರಲ್ಲಿ ಗ್ರಂಥಾಲಯ ಪ್ರಾಧಿಕಾರಕ್ಕೆ ಪ್ರೊ. ಕುಮಾರ್, ನಿವೃತ್ತ ಪ್ರಾಂಶುಪಾಲರು ಮತ್ತು ಸಿಂಡಿಕೇಟ್ ಸದಸ್ಯರು, # 139, 2ನೇ ಕ್ರಾಸ್ ಲಲಿತಾದ್ರಿ ರಸ್ತೆ, ಕುವೆಂಪುನಗರ, ಮೈಸೂರು ಇವರನ್ನು |

| | |
|---|---|
| | ದಿನಾಂಕ: 09-06-2016ರಂದು ರಾಜ್ಯ ಗ್ರಂಥಾಲಯ ಪ್ರಾಧಿಕಾರ ಸದಸ್ಯರನ್ನಾಗಿ ನೇಮಕ ಮಾಡಲಾಗಿತ್ತು. ಸದರಿ ಸದಸ್ಯರ ಅವಧಿಯು ಮುಕ್ತಾಯಗೊಂಡಿರುವುದರಿಂದ, ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರುಗಳಂದ ಚುನಾಯಿಸಿದ ಒಬ್ಬ ಸದಸ್ಯರ ಹೆಸರನ್ನು ಆಯ್ಕೆ ಮಾಡಿ ಕಳುಹಿಸಿ ಕೊಡಬೇಕೆಂದು ತಿಳಸಿರುವ ಹಿನ್ನೆಲೆಯಲ್ಲಿ ಇಂದಿನ ಸಿಂಡಿಕೇಟ್ ಸಭೆಯಲ್ಲಿ ಸದಸ್ಯರುಗಳು ಒಮ್ಮತದಿಂದ ಒಬ್ಬರು ಸಿಂಡಿಕೇಟ್ ಸದಸ್ಯರನ್ನು ನಾಮನಿರ್ದೇಶನ ಮಾಡಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ತೀರ್ಮಾನ | ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರೊಬ್ಬರ ಹೆಸರನ್ನು ನಾಮನಿರ್ದೇಶನ ಮಾಡುವ ಸಂಬಂಧ ಚರ್ಚಿಸಿದ ಸಭೆಯು ಶ್ರೀ.ಆರ್.ಪ್ರದೀಪ್ ಕುಮಾರ್ ದೀಕ್ಷಿತ್ ಅವರನ್ನು ಸಿಂಡಿಕೇಟ್ ಸದಸ್ಯತ್ವದ ಅವಧಿಯವರೆಗೆ ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲು ಸಿಂಡಿಕೇಟ್ ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/8.7 | ಭೋಜನ ವ್ಯವಸ್ಥೆಗೆ ಅಗತ್ಯವಾಗಿ ಬೇಕಾಗಿರುವ ದಿನಸಿ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವ ಮೆ: ಎನ್.ಸಿ.ಸಿ.ಎಫ್. ಆಫ್ ಇಂಡಿಯಾ ಲಿಮಿಟೆಡ್, ಬೆಂಗಳೂರು ಇವರನ್ನು ತಾತ್ಕಾಲಿಕವಾಗಿ ಮುಂದುವರಿಸಿರುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ವಿಶ್ವವಿದ್ಯಾನಿಲಯದ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳಲ್ಲಿನ ಭೋಜನ ವ್ಯವಸ್ಥೆಗೆ ಅಗತ್ಯವಾದ ದಿನಸಿ ಪದಾರ್ಥಗಳನ್ನು ಖರೀದಿಸುವ ಸಂಬಂಧ ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ದಿನಾಂಕ: 03-09-2019 ರಿಂದ 02-03-2020ರವರೆಗೆ ಮೆ: ಎನ್.ಸಿ.ಸಿ.ಫ್. ಆಫ್ ಇಂಡಿಯಾ ಲಿಮಿಟೆಡ್, ಬೆಂಗಳೂರು ಇವರಿಂದ ದಿನಸಿ ಸರಬರಾಜು ಪಡೆಯಲಾಗಿತ್ತು. ತದನಂತರ, ವಿದ್ಯಾರ್ಥಿನಿಲಯಗಳ ಆಡಳತದ ಹಿತದೃಷ್ಟಿಯಿಂದ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಭೋಜನ ವ್ಯವಸ್ಥೆಗೆ ತೊಂದರೆ ಉಂಟಾಗಬಾರದೆಂಬ ದೃಷ್ಟಿಯಿಂದ ದಿನಾಂಕ: 03-03-2020 ರಿಂದ 31-05-2020 ರವರೆಗೆ ತಾತ್ಕಾಲಿಕವಾಗಿ ಮುಂದುವರೆಸಲಾಯಿತು. ಕರ್ನಾಟಕ ಸರ್ಕಾರವು ದಿನಾಂಕ: 01-09-2020 ರಿಂದ ಅಂತಿಮ ವರ್ಷದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಗೆ ಪರೀಕ್ಷೆಗಳನ್ನು ನಡೆಸಬೇಕೆಂದು ಸೂಚಿಸಿದ ಹಿನ್ನೆಲೆಯಲ್ಲಿ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ದಿನಾಂಕ: 8-10-2020ರಂದು ಟೆಂಡರ್‌ಗಳನ್ನು ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆಯು ಪೂರ್ಣಗೊಳ್ಳುವವರೆಗೂ ತಾತ್ಕಾಲಿಕವಾಗಿ ಸದರಿಯವರಿಂದಲೇ ದಿನಸಿ ಪದಾರ್ಥಗಳನ್ನು ಖರೀದಿಸಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ತೀರ್ಮಾನ | ಕರ್ನಾಟಕ ಸರ್ಕಾರವು ದಿನಾಂಕ: 01-09-2020 ರಿಂದ ಅಂತಿಮ ವರ್ಷದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಗೆ ಪರೀಕ್ಷೆಗಳನ್ನು ನಡೆಸಬೇಕೆಂದು ಸೂಚಿಸಿದ ಹಿನ್ನೆಲೆಯಲ್ಲಿ ದಿನಾಂಕ: 8-10-2020 ರಂದು ಟೆಂಡರ್‌ಗಳನ್ನು ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆಯು ಪೂರ್ಣಗೊಳ್ಳುವವರೆಗೂ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಭೋಜನ ವ್ಯವಸ್ಥೆಗೆ ತೊಂದರೆಯಾಗದಂತೆ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ, ತಾತ್ಕಾಲಿಕವಾಗಿ ಮೆ: ಎನ್.ಸಿ.ಸಿ.ಎಫ್. ಆಫ್ ಇಂಡಿಯಾ ಲಿಮಿಟೆಡ್, ಬೆಂಗಳೂರು ಇವರಿಂದ ದಿನಸಿ ಪದಾರ್ಥಗಳನ್ನು ಖರೀದಿಸಿರುವುದನ್ನು ಸಭೆಯು ಅನುಸಮರ್ಥಿಸಿತು. |

| | |
|---|---|
| ಸಾಮಾನ್ಯ ಸಭೆ<br>2021/8.8 | 2020-21ನೇ ಸಾಲಿಗೆ ಭೋಜನ ವ್ಯವಸ್ಥೆಗೆ ಅಗತ್ಯವಾದ ಆಹಾರ ಪದಾರ್ಥಗಳನ್ನು ಒಂದು ವರ್ಷದ ಅವಧಿಗೆ ಪಡೆಯಲು ಮೆ. ಸೌಮ್ಯಶ್ರೀ ಟ್ರೇಡರ್ಸ್, ಮಂಡ್ಯರವರು ಆಯ್ಕೆಗೊಂಡಿರುವ ಬಗ್ಗೆ. |
| ತೀರ್ಮಾನ | ದಿನಾಂಕ: 16-01-2021ರಂದು ಮಾನ್ಯ ಕುಲಸಚಿವರ ಅಧ್ಯಕ್ಷತೆಯಲ್ಲಿ ನಡೆದ ಟೆಂಡರ್ ಅಂಗೀಕಾರ ಸಮಿತಿ ಸಭೆಯು ತುಲನಾತ್ಮಕ ಪಟ್ಟಿಯನ್ವಯ 2020-21ನೇ ಶೈಕ್ಷಣಿಕ ಸಾಲಿನಿಂದ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ: 04-03-2021 ರಿಂದ 03-03-2022 ರವರೆಗೆ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಭೋಜನ ವ್ಯವಸ್ಥೆಯನ್ನು ಕಲ್ಪಿಸುವ ಸಂಬಂಧ ಅಂಗೀಕೃತ ದರದಲ್ಲಿ 52 ರೀತಿಯ ಆಹಾರ ಪದಾರ್ಥಗಳನ್ನು ದರ ಸಂಧಾನದ ಸಭೆಯ ನಂತರ ಕನಿಷ್ಠ ದರಪಟ್ಟಿ ರೂ.23,21,689/-ಗಳಲ್ಲಿ ಸರಬರಾಜು ಮಾಡಲು ಮೆ: ಸೌಮ್ಯಶ್ರೀ ಟ್ರೇಡರ್ಸ್, ಮಂಡ್ಯ ಇವರಿಗೆ ನೀಡಿರುವ ಆದೇಶವನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ<br>2021/8.9 | 2020-21ನೇ ಸಾಲಿಗೆ ಭೋಜನ ವ್ಯವಸ್ಥೆಗೆ ಅಗತ್ಯವಾದ ದಿನಸಿ ಪದಾರ್ಥಗಳನ್ನು ಒಂದು ವರ್ಷದ ಅವಧಿಗೆ ಪಡೆಯಲು ಮೆ. ಸೌಮ್ಯಶ್ರೀ ಟ್ರೇಡರ್ಸ್, ಮಂಡ್ಯರವರು ಆಯ್ಕೆಗೊಂಡಿರುವ ಬಗ್ಗೆ. |
| ತೀರ್ಮಾನ | ದಿನಾಂಕ: 06-02-2021ರಂದು ಮಾನ್ಯ ಕುಲಸಚಿವರ ಅಧ್ಯಕ್ಷತೆಯಲ್ಲಿ ನಡೆದ ಟೆಂಡರ್ ಅಂಗೀಕಾರ ಸಮಿತಿ ಸಭೆಯು ತುಲನಾತ್ಮಕ ಪಟ್ಟಿಯನ್ವಯ 2020-21ನೇ ಶೈಕ್ಷಣಿಕ ಸಾಲಿನಿಂದ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ: 12-03-2021 ರಿಂದ 11-03-2022 ರವರೆಗೆ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಭೋಜನ ವ್ಯವಸ್ಥೆಯನ್ನು ಕಲ್ಪಿಸುವ ಸಂಬಂಧ ಅಂಗೀಕೃತ ದರದಲ್ಲಿ 81 ರೀತಿಯ ದಿನಸಿ ಪದಾರ್ಥಗಳನ್ನು ದರ ಸಂಧಾನದ ಸಭೆಯ ನಂತರ ಕನಿಷ್ಠ ದರಪಟ್ಟಿ ರೂ.43,15,138/-ಗಳಲ್ಲಿ ಸರಬರಾಜು ಮಾಡಲು ಮೆ: ಸೌಮ್ಯಶ್ರೀ ಟ್ರೇಡರ್ಸ್, ಮಂಡ್ಯ ಇವರಿಗೆ ನೀಡಿರುವ ಆದೇಶವನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ<br>2021/8.10 | ಭೋಜನ ವ್ಯವಸ್ಥೆಗೆ ಅಗತ್ಯವಾಗಿ ಬೇಕಾಗಿರುವ ಅಡುಗೆ ಸಿಬ್ಬಂದಿಗಳ ಸೇವೆಯನ್ನು ಒದಗಿಸುತ್ತಿರುವ ಮೆ. ಶಾರ್ಪ್ ವಾಚ್ ಇನ್‌ವೆಸ್ಟಿಗೇಷನ್, ಸೆಕ್ಯೂರಿಟಿ ಸರ್ವಿಸಸ್ ಪ್ರೈ.ಲಿ., ಮೈಸೂರು ಇವರನ್ನು ತಾತ್ಕಾಲಿಕವಾಗಿ ಮುಂದುವರಿಸಿರುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ಮೈಸೂರು ನಗರ ವ್ಯಾಪ್ತಿಯ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳಲ್ಲಿ ಶಿಕ್ಷಕ ಸಲಹೆಗಾರರ ನೇತೃತ್ವದಲ್ಲಿ 04 ತಿಂಗಳ ಅವಧಿಗೆ ಕಲ್ಪಿಸಲಾಗಿರುವ ಭೋಜನ ವ್ಯವಸ್ಥೆಗೆ ಅವಶ್ಯವಾಗಿ ಬೇಕಾಗಿರುವ 48 ಮುಖ್ಯ ಅಡುಗೆಯವರು ಹಾಗೂ 96 ಸಹಾಯಕ ಅಡುಗೆಯವರ ಸೇವೆಯನ್ನು ಹೊರಗುತ್ತಿಗೆಯ ಆಧಾರದ ಮೇಲೆ ಒದಗಿಸುತ್ತಿರುವ ಮೆ: ಶಾರ್ಪ್ ವಾಚ್ ಇನ್‌ವೆಸ್ಟಿಗೇಷನ್, ಸೆಕ್ಯೂರಿಟಿ ಸರ್ವಿಸಸ್ ಪ್ರೈ.ಲಿ., ಮೈಸೂರು ಇವರಿಗೆ ದಿನಾಂಕ: 01-09-2020 ರಿಂದ 31-12-2020ರವರೆಗೆ ಸೇವೆಯನ್ನು ಒದಗಿಸಲು ಆದೇಶವನ್ನು ನೀಡಲಾಗಿತ್ತು.<br><br>ಕರ್ನಾಟಕ ಸರ್ಕಾರವು ಕೋವಿಡ್-19 ತಡೆಗಟ್ಟುವ ಹಿನ್ನೆಲೆಯಲ್ಲಿ ದಿನಾಂಕ: 01-09-2020 ರಿಂದ ಕೇವಲ ಅಂತಿಮ ವರ್ಷದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ನಡೆಸಬೇಕೆಂದು ಸೂಚಿಸಿದ ಹಿನ್ನೆಲೆಯಲ್ಲಿ ಇದೊಂದು |

| | |
|---|---|
| | ವಿಶೇಷ ಪ್ರಕರಣವೆಂದು ಪರಿಗಣಿಸಿ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ ಊಟೋಪಚಾರ ವ್ಯವಸ್ಥೆಯಲ್ಲಿ ಯಾವುದೇ ರೀತಿಯ ತೊಂದರೆ ಉಂಟಾಗಬಾರದೆಂಬ ದೃಷ್ಟಿಯಿಂದ ಕಾನೂನು ಸಲಹೆಗಾರರ ಅಭಿಪ್ರಾಯ ಪಡೆದು ಮುಂದಿನ ಟೆಂಡರ್ ಆಹ್ವಾನಿಸಿ, ಪ್ರಕ್ರಿಯೆಯು ಪೂರ್ಣಗೊಳ್ಳುವವರೆಗೂ ಹಳೆಯ ಅಂಗೀಕೃತ ದರ ಒಪ್ಪಂದದ ಆಧಾರದ ಮೇಲೆ 48 ಮುಖ್ಯ ಅಡುಗೆಯವರು ಹಾಗೂ 96 ಸಹಾಯಕ ಅಡುಗೆಯವರ ಸೇವೆಯನ್ನು ಪಡೆಯಲಾಗಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| **ತೀರ್ಮಾನ** | ಮೈಸೂರು ನಗರ ವ್ಯಾಪ್ತಿಯ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳಲ್ಲಿ ಊಟೋಪಚಾರ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆ ಉಂಟಾಗಬಾರದು ಎಂಬ ದೃಷ್ಠಿಯಿಂದ ಇದೊಂದು ವಿಶೇಷ ಪ್ರಕರಣದ ದೃಷ್ಟಿಯಿಂದ ಕಾನೂನು ಸಲಹೆಗಾರರ ಅಭಿಪ್ರಾಯ ಪಡೆದು ಮುಂದಿನ ಟೆಂಡರ್ ಆಹ್ವಾನಿಸಿ, ಪ್ರಕ್ರಿಯೆಯು ಪೂರ್ಣಗೊಳ್ಳುವವರೆಗೂ ಹಳೆಯ ಅಂಗೀಕೃತ ದರ ಒಪ್ಪಂದದ ಆಧಾರದ ಮೇಲೆ 48 ಮುಖ್ಯ ಅಡುಗೆಯವರು ಹಾಗೂ 96 ಸಹಾಯಕ ಅಡುಗೆಯವರ ಸೇವೆಯನ್ನು ಪಡೆಯಲಾಗಿರುವುದನ್ನು ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ**<br>2021/8.11 | ದಿನಾಂಕ: 28-07-2020ರಂದು ಸನ್ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆದ 2020-21ನೇ ಶೈಕ್ಷಣಿಕ ಸಾಲಿನ 'ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳ ಆಡಳಿತ, ನಿರ್ವಹಣೆ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ಸಲಹಾ ಸಮಿತಿ'ಯ ಮೊದಲನೇ ಸಭೆಯ ನಡವಳಿ ಅನುಮೋದನೆ ಕೋರಿ. |
| **ತೀರ್ಮಾನ** | ಮುಂದೂಡಲಾಯಿತು |
| **ಸಾಮಾನ್ಯ ಸಭೆ**<br>2021/8.12 | ಕ್ರೈಸ್ಟ ಪ್ರಥಮ ದರ್ಜೆ ಕಾಲೇಜು, ಆಲನಹಳ್ಳಿ, ಮೈಸೂರು ಇವರ ಸಂಸ್ಥೆಯಲ್ಲಿ Management ವಿಷಯದಲ್ಲಿ ಹೊಸದಾಗಿ ಸಂಶೋಧನಾ ಕಾರ್ಯ ಕೈಗೊಳ್ಳಲು ವಿಶ್ವವಿದ್ಯಾನಿಲಯದ ಪರಿವೀಕ್ಷಣಾ ಸಮಿತಿಯು ಸಲ್ಲಿಸಿರುವ ವರದಿಯನುಸಾರ ಸಂಶೋಧನಾ ಕೇಂದ್ರದ ಮಾನ್ಯತೆ ನೀಡಿರುವ ಬಗ್ಗೆ-ಅನುಸಮರ್ಥನೆಗಾಗಿ. |
| | ಮಾನ್ಯ ಕುಲಪತಿಗಳು ಮಾತನಾಡಿ, ಸಂಶೋಧನಾ ಕೇಂದ್ರದ ಮಾನ್ಯತೆಗೆ ಸಂಬಂಧಿಸಿದಂತೆ, ಎಲ್ಲಾ ದಾಖಲಾತಿಗಳನ್ನು ಯೋಜನೆ, ಉಸ್ತುವಾರಿ ಹಾಗೂ ಮೌಲ್ಯಮಾಪನ ಮಂಡಳಿಗೆ ಸಲ್ಲಿಸಬೇಕೆಂದು ಹಾಗೂ ಮುಂದಿನ ದಿನಗಳಲ್ಲಿ ಯಾವುದೇ ಸಂಸ್ಥೆಗಳು ಹೊಸದಾಗಿ ಸಂಶೋಧನಾ ಕೇಂದ್ರದ ಮಾನ್ಯತೆ ಪಡೆಯುವ ಸಂಬಂಧ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ವರದಿ ನೀಡಲು ಡೀನರ ಅಧ್ಯಕ್ಷತೆಯಲ್ಲಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ & ತಂತ್ರಜ್ಞಾನ ನಿಕಾಯದಲ್ಲಿ ಒಬ್ಬೊಬ್ಬರು ಪ್ರಾಧ್ಯಾಪಕರನ್ನೊಳಗೊಂಡಂತೆ ಸಮಿತಿಯನ್ನು ರಚಿಸಲಾಗುವುದೆಂದು ತಿಳಿಸಿದರು. |
| **ತೀರ್ಮಾನ** | ಪರಿವೀಕ್ಷಣಾ ಸಮಿತಿಯು ಸಲ್ಲಿಸಿರುವ ವರದಿಯನುಸಾರ ಮತ್ತು The University of Mysore-Recognition of Certain Institutions for Specified Studies/Specialized and Research Statutes 2008" ಅಧಿನಿಯಮದಲ್ಲಿರುವ ಅವಕಾಶದನುಸಾರ ಮಾನ್ಯ ಕುಲಪತಿಗಳು ನೀಡಿದ್ದ ಅನುಮೋದನೆಯ ಮೇರೆಗೆ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ, ಕ್ರೈಸ್ಟ ಪ್ರಥಮ ದರ್ಜೆ ಕಾಲೇಜು, ಆಲನಹಳ್ಳಿ, ಮೈಸೂರು ಈ ಸಂಸ್ಥೆಯಲ್ಲಿ ಹೊಸದಾಗಿ Management ವಿಷಯದಲ್ಲಿ |

| | |
|---|---|
| | ಸಂಶೋಧನಾ ಕಾರ್ಯ ಕೈಗೊಳ್ಳಲು ಸಂಶೋಧನಾ ಕೇಂದ್ರದ ಮಾನ್ಯತೆ ನೀಡಿ ದಿನಾಂಕ: 18-08-2021ರಂದು ಅಧಿಸೂಚನೆಯನ್ನು ಹೊರಡಿಸಿ ವಿಶ್ವವಿದ್ಯಾನಿಲಯವು ಕೈಗೊಂಡಿರುವ ಕ್ರಮವನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2021/8.13 | ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| ತೀರ್ಮಾನ | ಪ್ರೊ. ಬಿ.ಎಸ್.ಬಿರಾದಾರ್, ಪ್ರಾಧ್ಯಾಪಕರು, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 04-11-2019 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ವಿಭಾಗದ ಅಧ್ಯಕ್ಷರ ಅವಧಿಯು ದಿನಾಂಕ: 03-11-2021ಕ್ಕೆ ಮುಕ್ತಾಯಗೊಳ್ಳುತ್ತಿದೆ. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ ಜೇಷ್ಠತೆಯಲ್ಲಿ ಹಿರಿಯರಾಗಿರುವ ಪ್ರೊ. ಗೂಟಿ ದಿವಾನ್ ಜಿ, ಪ್ರಾಧ್ಯಾಪಕರು, ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 04-11-2021 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಸಂಖ್ಯಾಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/8.14 | ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| ತೀರ್ಮಾನ | ಪ್ರೊ. ಜಿ.ಕರಿಯಪ್ಪ, ಪ್ರಾಧ್ಯಾಪಕರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 04-11-2019 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದ್ದು, ಇವರ ವಿಭಾಗದ ಅಧ್ಯಕ್ಷರ ಅವಧಿಯು ದಿನಾಂಕ: 03-11-2021ಕ್ಕೆ ಮುಕ್ತಾಯಗೊಳ್ಳುತ್ತಿದೆ. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ ಜೇಷ್ಠತೆಯಲ್ಲಿ ಹಿರಿಯರಾಗಿರುವ ಡಾ. ಕೆ.ಪ್ರಭು, ಸಹ ಪ್ರಾಧ್ಯಾಪಕರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 04-11-2021 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/8.15 | "Prof. B.S. Vishwanath Gold Medal" ಮತ್ತು "Prof. B.S. Vishwanath Gold Medal-Founder Chairman of Molecular Biology Department For M.Sc. ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಅನ್ವಯ ಪ್ರಕರಣ 31 (2) (IX) ಪ್ರಕಾರ ಪ್ರೊ. ಬಿ.ಎಸ್.ವಿಶ್ವನಾಥ್, # 163, 5ನೇ ಮೇನ್, ಎ ಬ್ಲಾಕ್, ವಿಜಯನಗರ 3ನೇ ಹಂತ, ಮೈಸೂರು ಇವರ ಹೆಸರಿನಲ್ಲಿ ಎರಡು ಚಿನ್ನದ ಪದಕಗಳನ್ನು ಸ್ಥಾಪನೆ ಮಾಡಲು ತಲಾ ರೂ.1,00,000/-ಗಳಂತೆ ಒಟ್ಟು ರೂ.2,00,000/-ಗಳ ಡಿ.ಡಿ. ನೀಡಿದ್ದು, ದಾನಿಗಳು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20ರಷ್ಟನ್ನು ದತ್ತಿಯ ಮೂಲಧನಕ್ಕೆ ಸೇರಿಸಿ, ಉಳಿದ ಶೇ.80ರಷ್ಟು ಬಡ್ಡಿಯ ಹಣವನ್ನು ಮತ್ತು ಸಂಬಂಧಿತ ವಿಷಯ/ಪತ್ರಿಕೆಯಲ್ಲಿ ನಾಲ್ಕು ಸೆಮಿಸ್ಟರ್‌ಗಳಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾದ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗೆ ಚಿನ್ನದ ಪದಕಗಳನ್ನು ನೀಡುವ ಸಂಬಂಧ ದತ್ತಿ ಸ್ಥಾಪನೆ ಮಾಡಲು ಸಿಂಡಿಕೇಟ್ ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/8.16 | ವಿದ್ಯಾಶ್ರಮ ಪ್ರಥಮ ದರ್ಜೆ ಕಾಲೇಜು, ಮೈಸೂರು, ಕಾನೂನು ಸಲಹೆಗಾರರು ನೀಡಿರುವ ಅಭಿಪ್ರಾಯದ ವರದಿಯ ಬಗ್ಗೆ. |
| ತೀರ್ಮಾನ | ವಿದ್ಯಾಶ್ರಮ ಪ್ರಥಮ ದರ್ಜೆ ಕಾಲೇಜು, ಮೈಸೂರು ಕಟ್ಟಡದ ಕರಾರಿಗೆ ಸಂಬಂಧಿಸಿದಂತೆ, ಕಾನೂನು ಸಲಹೆಗಾರರು ನೀಡಿರುವ ಅಭಿಪ್ರಾಯದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/8.17 | B.Tech. Planning/B. Planning ಕೋರ್ಸ್‌ನ ವಿನಿಯಮಾವಳಿಯನ್ನು (Regulations) ಸರ್ಕಾರದ ಅಂಕಿತಕ್ಕಾಗಿ ಕಳುಹಿಸುವ ಬಗ್ಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುತ್ತಿರುವ B.Tech. Planning/B.Planning ಕೋರ್ಸ್‌ನ ವಿನಿಯಮಾವಳಿಯನ್ನು ದಿನಾಂಕ: 18-02-2020 ಹಾಗೂ 18-06-2020 ರಂದು ಜರುಗಿದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಹಾಗೂ ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆಯನ್ನು ಪಡೆದು ದಿನಾಂಕ: 19-08-2020 ರಂದು ಅಧಿಸೂಚನೆಯನ್ನು ಹೊರಡಿಸಲಾಗಿರುವುದನ್ನು ಗಮನಿಸಿದ ಸಭೆಯು B.Tech. Planning / B. Planning ಕೋರ್ಸ್‌ನ ವಿನಿಯಮಾವಳಿಯನ್ನು (Regulations) ಶಿಫಾರಸ್ಸು ಮಾಡಿ ಮಾನ್ಯ ಕುಲಾಧಿಪತಿಗಳ ಅಂಕಿತಕ್ಕಾಗಿ ಸರ್ಕಾರಕ್ಕೆ ಕಳುಹಿಸಲು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/8.18 | ಸಮಾಜಕಾರ್ಯ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಮಾನ್ಯ ಕುಲಪತಿಯವರು ಮಾತನಾಡಿ, ಡಾ.ಹೆಚ್.ಎಸ್.ಚಂದ್ರಮೌಳಿ ಇವರ ಸಮಾಜಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರ ಅವಧಿಯು ದಿನಾಂಕ: 06-09-2021ಕ್ಕೆ ಮುಕ್ತಾಯಗೊಳ್ಳುತ್ತಿದ್ದು, ನಂತರದ ಜೇಷ್ಠತೆಯಲ್ಲಿ ಸಮಾಜಕಾರ್ಯ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ಆರ್.ಶಿವಪ್ಪ, ಪ್ರಾಧ್ಯಾಪಕರು ಅವರು ಹಿರಿಯರಾಗಿರುತ್ತಾರೆ. ಆದರೆ ಪ್ರಸ್ತುತ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ವಿಭಾಗದಲ್ಲಿ ಯಾರು ಪ್ರಾಧ್ಯಾಪಕರು ಇರುವುದಿಲ್ಲ. ಇವರ ನಂತರ ಡಾ. ಹೆಚ್.ಪಿ.ಜ್ಯೋತಿ, ಸಹಾಯಕ ಪ್ರಾಧ್ಯಾಪಕರು, ಸಮಾಜಕಾರ್ಯ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರು ಸಹ ಪ್ರಸ್ತುತ ಸಂಯೋಜನಾಧಿಕಾರಿಯಾಗಿ ಪಿಹೆಚ್.ಡಿ ಪ್ರವೇಶ ಪರೀಕ್ಷೆ ಹಾಗೂ ಕೋರ್ಸ್‌ವರ್ಕ್ ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ, ಡಾ.ಹೆಚ್.ಎಸ್.ಚಂದ್ರಮೌಳಿ ಇವರ ಅಧ್ಯಕ್ಷರ ಅವಧಿಯು ಮುಕ್ತಾಯಗೊಳ್ಳುವ ಮುಂಚೆಯೇ ಡಾ. ಹೆಚ್.ಪಿ.ಜ್ಯೋತಿ ಅವರು ಸಿಎಎಸ್ ಅಡಿಯಲ್ಲಿ ಸಹ ಪ್ರಾಧ್ಯಾಪಕರಾಗಿ ಪದೋನ್ನತಿ ಹೊಂದಿರುವುದರಿಂದ, ದಿನಾಂಕ: 07-09-2021 ರಿಂದ ಜಾರಿಗೆ ಬಂದಂತೆ ಸಮಾಜಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಬಹುದೆಂದು ಪ್ರಸ್ತಾಪಿಸಿದರು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ ಡಾ. ಹೆಚ್.ಪಿ.ಜ್ಯೋತಿ, ಸಹ ಪ್ರಾಧ್ಯಾಪಕರು, ಸಮಾಜಕಾರ್ಯ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 07-09-2021 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಸಮಾಜಕಾರ್ಯ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |

| | |
|---|---|
| ಸಾಮಾನ್ಯ ಸಭೆ 2021/8.19 | ಶ್ರೀ ಟಿ.ಸಿ. ನಾರಾಯಣ, ಪ್ರಥಮ ದರ್ಜೆ ಗುಮಾಸ್ತರು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು ಇವರ ತಾತ್ಕಾಲಿಕ ಸೇವೆಯನ್ನು ಖಾಯಂ ಸೇವೆ ಎಂದು ಪರಿಗಣಿಸುವ ಕುರಿತು. |
| ತೀರ್ಮಾನ | ಶ್ರೀ ಟಿ.ಸಿ. ನಾರಾಯಣ, ಪ್ರಥಮ ದರ್ಜೆ ಗುಮಾಸ್ತರು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು ಇವರ ಹುದ್ದೆಯನ್ನು Supernumerary ಯನ್ನಾಗಿ ಸೃಜಿಸಿ, ದಿನಾಂಕ: 23-11-2000 ರಿಂದ ಜಾರಿಗೆ ಬಂದಂತೆ ಸೇವಾ ಹಿರಿತನವನ್ನು ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/8.20 | ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ಸಂಜೆ ಕಾಲೇಜಿಗೆ ಪ್ರಭಾರ ಪ್ರಾಂಶುಪಾಲರನ್ನು ನೇಮಿಸುವ ಬಗ್ಗೆ. |
| ತೀರ್ಮಾನ | ಪ್ರಸ್ತುತ ಚಾಲ್ತಿಯಲ್ಲಿರುವ ಜೇಷ್ಠತಾ ಪಟ್ಟಿಯ ಅನುಸಾರ ಡಾ.ಹೆಚ್.ಸಿ.ದೇವರಾಜೇಗೌಡ ಇವರು ಹಿರಿಯರಾಗಿರುವುದರಿಂದ, ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ಸಂಜೆ ಕಾಲೇಜಿಗೆ ಪ್ರಭಾರ ಪ್ರಾಂಶುಪಾಲರಾಗಿ ಡಾ.ಹೆಚ್.ಸಿ.ದೇವರಾಜೇಗೌಡ ಇವರನ್ನು ನೇಮಕ ಮಾಡಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/8.21 | ಪ್ರೊ. ಸಿ. ಸುಮಂಗಲ, ವ್ಯವಹಾರ ಆಡಳಿತ ವಿಭಾಗ, ಯುವರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ಮಂಜೂರು ಮಾಡಿರುವ ಸೆಬಾಟಿಕಲ್ ರಜೆಯ ಅನುಸಮರ್ಥನೆಗಾಗಿ ಹಾಗೂ ಯುಎಸ್‌ಎ ದೇಶಕ್ಕೆ ತೆರಳಲು ಅನುಮತಿ ಕೋರಿರುವ ಬಗ್ಗೆ. |
| ತೀರ್ಮಾನ | ಸೆಬಾಟಿಕಲ್ ಸಮಿತಿ ಸಭೆಯ ಶಿಫಾರಸ್ಸಿನನ್ವಯ ಹಾಗೂ ಮಾನ್ಯ ಕುಲಪತಿಯವರ ಆದೇಶಾನುಸಾರ ಸಿಂಡಿಕೇಟ್ ಸಭೆಯ ಅನುಮೋದನೆಯನ್ನು ಕಾಯ್ದಿರಿಸಿ ಪ್ರೊ. ಸಿ. ಸುಮಂಗಲ, ವ್ಯವಹಾರ ಆಡಳಿತ ವಿಭಾಗ, ಯುವರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ದಿನಾಂಕ: 01-09-2021 ರಿಂದ 31-08-2022 ರವರೆಗೆ ಸೆಬಾಟಿಕಲ್ ರಜೆಯನ್ನು ಮಂಜೂರು ಮಾಡಿ ಹೊರಡಿಸಿರುವ ಆದೇಶವನ್ನು ಸಭೆಯು ಅನುಸಮರ್ಥಿಸಿತು ಹಾಗೂ ವಿಶ್ವವಿದ್ಯಾನಿಲಯದ ಮೇಲೆ ಯಾವುದೇ ಆರ್ಥಿಕ ಹೊಣೆಗಾರಿಕೆಯು ಇಲ್ಲದಂತೆ ಶೈಕ್ಷಣಿಕ ಕಾರ್ಯಕ್ರಮಗಳ ಸಂಬಂಧ ದಿನಾಂಕ: 02-09-2021 ರಿಂದ 30-04-2022ರವರೆಗೆ ಯುಎಸ್‌ಎ ದೇಶಕ್ಕೆ ತೆರಳಲು ಸಭೆಯು ಅನುಮತಿಸಿತು. |
| ಸಾಮಾನ್ಯ ಸಭೆ 2021/8.22 | ಡಾ. ಚೈತ್ರಾ ನಾರಾಯಣ, ಸಿಂಡಿಕೇಟ್ ಸದಸ್ಯರು, ಇವರು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಿರುವ Sanitary pad dispenser & incinerator, drinking waters units & maintenance of toilets ಬಗ್ಗೆ ಮಾಹಿತಿ ಕೋರಿರುವ ಬಗ್ಗೆ. |
| | ಡಾ. ಚೈತ್ರಾ ನಾರಾಯಣ್ ರವರು ಮಾತನಾಡಿ, ಪ್ರತಿಯೊಂದು ವಿಭಾಗದಲ್ಲಿ ಅಳವಡಿಸಿರುವ Sanitary pad dispensers and incenerators ಗಳು ಕಳೆದ 2 ವರ್ಷಗಳಿಂದ ಚಾಲ್ತಿಯಲ್ಲಿ ಇರುವುದಿಲ್ಲ ಹಾಗಾಗಿ ಇದರ Procurement details, Annual Maintenance details & Service Period ನ ಮಾಹಿತಿಯನ್ನು ತುರ್ತಾಗಿ ನೀಡಲು ಕೋರಿದರು. Drinking water facility details, overall basic details ನೀಡಲು ಸಭೆಗೆ ತಿಳಿಸಿದರು. ಹಾಗೂ ಕೆಲವು ವಿಭಾಗಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಸರಿಯಾಗಿರುವುದಿಲ್ಲ ಎಂದು ತಿಳಿಸಿ, ಇದರ ಬಗ್ಗೆ ತುರ್ತಾಗಿ ಗಮನ ಹರಿಸಬೇಕಾಗಿ ಕೋರಿದರು. |
| ತೀರ್ಮಾನ | Hon'ble Vice chancellor has consented to form an Annual Maintenance Monitoring Committee to look into the above matter. Only after proper maintenance of the facilities for 6 months, their bills shall be released. All the procurement details shall be given. |

**ಸಾಮಾನ್ಯ ಸಭೆ 2021/8.23**

ತಾತ್ಕಾಲಿಕ ಅಧ್ಯಾಪಕೇತರ ನೌಕರರುಗಳ ವೇತನ ಪರಿಷ್ಕರಣೆ ಬಗ್ಗೆ.

**ತೀರ್ಮಾನ**

ದಿನಾಂಕ: 10-08-2021ರಂದು ಮಾನ್ಯ ಕುಲಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಿಂಡಿಕೇಟ್ ಉಪ ಸಮಿತಿ ಸಭೆಯ ಶಿಫಾರಸ್ಸಿನನ್ವಯ ಮೈಸೂರು ವಿಶ್ವವಿದ್ಯಾನಿಲಯದ ತಾತ್ಕಾಲಿಕ ಸೇವೆಯಲ್ಲಿ ಹತ್ತು ವರ್ಷ ಪೂರ್ಣಗೊಂಡಿರುವ ತಾತ್ಕಾಲಿಕ 'ಸಿ' ಮತ್ತು 'ಡಿ' ವೃಂದದ ಉದ್ಯೋಗಿಗಳಿಗೆ ಈ ಕೆಳಕಂಡಂತೆ ದಿನಾಂಕ: <u>01-01-2022</u> ರಿಂದ ಜಾರಿಗೆ ಬಂದಂತೆ ವೇತನ ಪರಿಷ್ಕರಿಸಲು ಸಭೆಯು ತೀರ್ಮಾನಿಸಿತು.

| ವರ್ಗ | 10-15 ವರ್ಷ (ರೂ.ಗಳಲ್ಲಿ) | 15-17 ವರ್ಷ (ರೂ.ಗಳಲ್ಲಿ) | 17-20 ವರ್ಷ (ರೂ.ಗಳಲ್ಲಿ) | 20 ವರ್ಷಕ್ಕಿಂತ ಹೆಚ್ಚು (ರೂ.ಗಳಲ್ಲಿ) |
|---|---|---|---|---|
| ' ಸಿ ' ವೃಂದ | 1,500/- | 3,000/- | 3,500/- | 6,000/- |
| ' ಡಿ ' ವೃಂದ | 1,000/- | 2,500/- | 3,000/- | 4,000/- |

**ಸಾಮಾನ್ಯ ಸಭೆ 2021/8.24**

ವಿಶ್ವವಿದ್ಯಾನಿಲಯದಲ್ಲಿ ಸಮಿತಿ ರಚಿಸಿರುವ ಬಗ್ಗೆ.

ಡಾ. ಈ.ಸಿ.ನಿಂಗರಾಜ್ ಗೌಡ ಮತ್ತು ಶ್ರೀ ಪ್ರದೀಪ್ ಕುಮಾರ್ ದೀಕ್ಷಿತ್ ಅವರುಗಳು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ದಿನಾಂಕ: 05-01-2020 ರಿಂದ 30-06-2021ರ ಅವಧಿಯಲ್ಲಿ ರಚಿಸಲಾಗಿರುವ ಸಿಂಡಿಕೇಟ್ ಉಪ ಸಮಿತಿ ಸಭೆಗಳ ವಿವರಗಳನ್ನು ನೀಡಿರುವುದು ಸರಿಯಷ್ಟೆ. ಆದರೆ, ಸಭೆಗಳ ತೀರ್ಮಾನ ಮತ್ತು ತೀರ್ಮಾನದಂತೆ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ಸಹ ಒದಗಿಸುವುದು ಸೂಕ್ತವೆಂದು ತಿಳಿಸಿದರು.

ಡಾ. ಚೈತ್ರ ನಾರಾಯಣ ಅವರು ಮಾತನಾಡಿ, ಕೆಲವು ಸಿಂಡಿಕೇಟ್ ಉಪ ಸಮಿತಿಗಳಿಗೆ ಸದಸ್ಯರನ್ನಾಗಿ ನೇಮಕ ಮಾಡಲಾಗಿರುತ್ತದೆ. ಆದರೆ, ಸಭೆಗಳ ನಡವಳಿಗಳು ಒಂದು ಬಾರಿಯು ತಲುಪಿರುವುದಿಲ್ಲ. ಇನ್ನು ಮುಂದೆಯಾದರೂ ನಾವುಗಳು ಹಾಜರಾಗುವ ಸಭೆಗಳ ಮಾಹಿತಿ ಹಾಗೂ ನಡವಳಿಯನ್ನು ಕಳುಹಿಸಬೇಕೆಂದು ತಿಳಿಸಿದರು.

**ತೀರ್ಮಾನ**

ಮುಂದಿನ ಸಿಂಡಿಕೇಟ್ ಸಭೆಯಲ್ಲಿ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ದಿನಾಂಕ: 05-01-2020 ರಿಂದ 30-06-2021 ರ ಅವಧಿಯಲ್ಲಿ ರಚಿಸಲಾಗಿರುವ ಸಿಂಡಿಕೇಟ್ ಉಪ ಸಮಿತಿ ಸಭೆಗಳ ವಿವರಗಳನ್ನು ಹಾಗೂ present status ಗಳ ಮಾಹಿತಿಯನ್ನು ಒದಗಿಸಲು ತೀರ್ಮಾನಿಸಲಾಯಿತು.

**ಸಾಮಾನ್ಯ ಸಭೆ 2021/8.25**

ವಿಶ್ವವಿದ್ಯಾನಿಲಯದ ಉಪಯೋಗಕ್ಕಾಗಿ ಎರಡು ಹೊಸ ಕಾರುಗಳನ್ನು ಖರೀದಿಸುವ ಬಗ್ಗೆ.

**ತೀರ್ಮಾನ**

~~2020-21~~ 2021-22ನೇ ಸಾಲಿನ ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳಿಂದ ಭರಿಸಿ Govt e Market (GeM) ಮುಖಾಂತರ ವಿಶ್ವವಿದ್ಯಾನಿಲಯದ ಉಪಯೋಗಕ್ಕಾಗಿ ಎರಡು ಹೊಸ ಕಾರುಗಳನ್ನು ಖರೀದಿಸಲು ಸಭೆಯಲ್ಲಿ ಅನುಮೋದಿಸಲಾಯಿತು.

**ಸಾಮಾನ್ಯ ಸಭೆ 2021/8.26**

ಡಾ. ಚೈತ್ರಾ ನಾರಾಯಣ, ಸಿಂಡಿಕೇಟ್ ಸದಸ್ಯರು, ಇವರು ವಿಶ್ವವಿದ್ಯಾನಿಲಯದಲ್ಲಿ ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಗುರುತಿನ ಚೀಟಿ ನೀಡಲು ಕ್ರಮವಹಿಸುವಂತೆ ಕೋರಿರುವ ಬಗ್ಗೆ.

**ತೀರ್ಮಾನ**

It has been decided that Identity Cards shall be issued to all the Guest Faculty working at Univeristy of Mysore for a stipulated period of 1 year subject to renewal. Hon'ble Vice-Chancellor has said that Steps will be taken to issue ID Cards to all the Guest Faculty in 1 to 2 months.

| | |
|---|---|
| ಸಾಮಾನ್ಯ ಸಭೆ 2021/8.27 | MOU with Mythic Society of India, Bengalore |
| ತೀರ್ಮಾನ | The Mythic Society of India, Bengaluru is intended to enter into an MOU with Oriental Research Institute of University of Mysore to digitize the ORI manuscripts. Selected Manuscripts will be given to the Society to digitize the same. Before entrusting the digitization work to the Society, a committee will be formed by the University and with the approval of the committee only the selected manuscripts will be given to the society.<br>• A committee will be formed to change the statutes of appointing ORI Director.<br>• The person interested in the manuscripts to be appointed as Director.<br>• By end of November or December to prepare the statutes and send to the Government.<br>The subject of entering into MOU with Mythic Society of India Bengaluru is **APPROVED.** |
| ಸಾಮಾನ್ಯ ಸಭೆ 2021/8.28 | Promotions to Univerity Teachers Under UGC-CAS |
| ತೀರ್ಮಾನ | The Syndicate has approved the recommendations of the Selection Committee in various subjects for promotion of teachers in various disciplines to the higher AGP furnished at Annexure – A is approved.<br>Further, the Syndicate has also decided to extend the monetary benefits to the teachers from the date of the Eligibility or from the decision of the Syndicate which was held on 25-11-2020 whichever is later in respect to the cadre of Professor. In respect to the cadre of Associate Professor promoted from Assistant Professor the monetary benefits is from the date of the decision of the Syndicate i.e. 03-09-2021. |
| ಸಾಮಾನ್ಯ ಸಭೆ 2021/8.29 | ಮೈಸೂರು ವಿಶ್ವವಿದ್ಯಾನಿಲಯದ ಗ್ರಂಥಾಲಯ ಸಹಾಯಕರಿಗೆ ಸಹಾಯಕ ಗ್ರಂಥಪಾಲಕರಾಗಿ ಪದೋನ್ನತಿ ನೀಡಿರುವ ಸಂಬಂಧ ಉಚ್ಚ ನ್ಯಾಯಾಲಯದ ನಿರ್ದೇಶಾನುಸಾರ ಕ್ರಮ ವಹಿಸುವ ಬಗ್ಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ ಗ್ರಂಥಾಲಯ ಸಹಾಯಕರಿಗೆ ಸಹಾಯಕ ಗ್ರಂಥಪಾಲಕರಾಗಿ ಪದೋನ್ನತಿ ನೀಡಿರುವ ಸಂಬಂಧ ಉಚ್ಚ ನ್ಯಾಯಾಲಯದ ನಿರ್ದೇಶಾನುಸಾರ ಹಾಗೂ ಕಾನೂನು ಸಲಹೆಗಾರರ ಅಭಿಪ್ರಾಯದ ಮೇರೆಗೆ, ಮುಂದಿನ ಕ್ರಮ ತೆಗೆದುಕೊಳ್ಳಲು ವಿಶ್ವವಿದ್ಯಾನಿಲಯಕ್ಕೆ ತಿಳಿಸಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಸ್ಥಿತಿಯಂತೆ (present status) ಮುಂದುವರೆಸಲು ಸಿಂಡಿಕೇಟ್ ಸಭೆಯು ಅನುಮತಿ ನೀಡಿತು. |

**ಸಾಮಾನ್ಯ ಸಭೆ 2021/8.30** — To start Courses at University School of Engineering from academic year 2021-22.

The AICTE has approved to start the Engineering courses in the below emerging areas from the academic year 2021-22 at University School of Engineering with the approved intake of 300 and 60 in each branch.

- Civil Environmental Engineering
- Artificial intelligence and Machine Learning
- Artificial intelligence (AI) and Data Science
- Computer Science and Design
- Biomedical and Robotic Engineering

The approval received from AICTE, request letter has been submitted to Government of Karnataka to include the college name and 50% seats in each branch to the KEA List.

Remaining 50% of self-finance seats will be admitted by UOM on first cum first serve basis maintaining the roster. The clubbed roster will be calculated for 150 seats and the seat pattern will be as follows:

| Category | Reservation % |
|---|---|
| Scheduled Caste (SC) | 15 |
| Scheduled Caste (ST) | 03 |
| Category I | 04 |
| Category IIA | 15 |
| Category IIB | 04 |
| Category IIIA | 04 |
| Category IIIB | 05 |

**ತೀರ್ಮಾನ**

- The University will admit the students on first cum first serve basis for 150 seats maintaining the roster for this academic year. (2021-22)
- As per the PG Admission the other/special/University employee quotas will be followed in the engineering courses.
- To appoint teachers on contract basis for a term of five to six years, permission will be taken from the Government this year for appointing teachers.

This was approved by the syndicate.

**ಸಾಮಾನ್ಯ ಸಭೆ 2021/8.31** — Presentation of Information by Director, IQAC regarding visit of NAAC Peer team to University of Mysore.

**ತೀರ್ಮಾನ**

The syndicate members observed the presentation of Information submitted by Director, IQAC regarding visit of NAAC peer team to University of Mysore, which has been scheduled on 15th to 17th September 2021.

ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಹಿಂದುಳಿದ ವರ್ಗಗಳ ಕೋಶದ ಘಟಕದ ವತಿಯಿಂದ 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಸಂಶೋಧನಾ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಮಾಹೆಯಾನ ರೂ. 12,000/-ಗಳಂತೆ ವಿಕಲ ಚೇತನ ಸಂಶೋಧಕರಿಗೆ 02 ಹಾಗೂ ಹೈದರಾಬಾದ್ ಕರ್ನಾಟಕ ಸಂಶೋಧಕರಿಗೆ 02 ಒಟ್ಟು 40+(2+2)=44 ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಲು ತೀರ್ಮಾನಿಸಿರುವುದನ್ನು ಡಾ. ಚೈತ್ರ ನಾರಾಯಣ ರವರು ಸಿಂಡಿಕೇಟ್ ಸಭೆಯಲ್ಲಿ ಮಾನ್ಯ ಕುಲಪತಿಗಳಿಗೆ ಅಭಿನಂದನೆ ಸಲ್ಲಿಸಿದರು.

ಅಂತಿಮವಾಗಿ ಸಭೆಯಲ್ಲಿ ಮುಕ್ತವಾಗಿ ಚರ್ಚಿಸಿ, ಸೂಕ್ತ ನಿರ್ಣಯಗಳನ್ನು ತೆಗೆದುಕೊಳ್ಳಲು ಸಹಕಾರ ಹಾಗೂ ಸಲಹೆಗಳನ್ನು ನೀಡಿರುವ ಎಲ್ಲಾ ಸದಸ್ಯರುಗಳಿಗೆ ವಂದನೆಗಳನ್ನರ್ಪಿಸುವ ಮೂಲಕ ಸಭೆಯು ಮುಕ್ತಾಯವಾಯಿತು.

ಕುಲಸಚಿವರು ಮತ್ತು ಸದಸ್ಯ ಕಾರ್ಯದರ್ಶಿ

ಕುಲಪತಿಗಳು ಮತ್ತು ಅಧ್ಯಕ್ಷರು